# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:– ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತದಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಮತ್ತು ಮಾರ್ಗಸೂಚಿಗಳಿಗೆ ಸರ್ಕಾರದ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:–
1. 2017–18ನೇ ಸಾಲಿನ ಆಯವ್ಯಯ ಭಾಷಣ .
2. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 124 ಬಿಸಿಎ 2017. ದಿನಾಂಕ:18/05/2017 ಮತ್ತು 12/10/2017.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ, ನಿಯಮಿತ ರವರ ಸಂಖ್ಯೆ: ಕಉಅನಿ/ಮಾರ್ಗಸೂಚಿ/ಸಿಆರ್–7/2018–19. ದಿನಾಂಕ:07/05/2018.

ಆಯುಕ್ತರ ಕಛೇರಿ
ಸಂಖ್ಯೆ:
ತಾ: 21.08.18
ಹಿಂದುಳಿದ ವರ್ಗಗಳ

**ಪ್ರಸ್ತಾವನೆ:–**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಂತೆ 2017–18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಉಪ್ಪಾರ ಮತ್ತು ಇದರ ಉಪಜಾತಿಗಳ ಸಮಗ್ರ ಅಭಿವೃದ್ಧಿಗಾಗಿ ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮವನ್ನು ಕ್ರಮ ಸಂಖ್ಯೆ (2)ರ ಆದೇಶಗಳನ್ವಯ ಕಂಪನಿ ಕಾಯ್ದೆ 2013ರನ್ವಯ ದಿನಾಂಕ:31/10/2017ರಂದು ಸ್ಥಾಪಿಸಲಾಗಿದೆ.

2017–18ನೇ ಸಾಲಿಗೆ ರಾಜ್ಯ ಸರ್ಕಾರವು ರೂ.500.00ಲಕ್ಷ ಷೇರು ಬಂಡವಾಳವನ್ನು ಮತ್ತು 2018–19ನೇ ಸಾಲಿಗೆ ರೂ.200.00ಲಕ್ಷ ಷೇರು ಬಂಡವಾಳವನ್ನು ಆಯವ್ಯಯದಲ್ಲಿ ಒದಗಿಸಿದೆ. ಕ್ರಮ ಸಂಖ್ಯೆ (3)ರಲ್ಲಿ ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ ಉಪ್ಪಾರ ಮತ್ತು ಇದರ ಉಪಜಾತಿಗಳ ಆರ್ಥಿಕಾಭಿವೃದ್ಧಿಗಾಗಿ 1.ಸ್ವಯಂ ಉದ್ಯೋಗ ಸಾಲ ಯೋಜನೆ 2.ಅರಿವು ಶೈಕ್ಷಣಿಕ ಸಾಲ/ವಿದೇಶಿ ವಿಶ್ವವಿದ್ಯಾಲಯದಲ್ಲಿ ವ್ಯಾಸಂಗಕ್ಕೆ ಸಾಲ 3.ಗಂಗಾ ಕಲ್ಯಾಣ ನೀರಾವರಿ ಯೋಜನೆಯಲ್ಲಿ ಸಾಲ/ಸೌಲಭ್ಯ ಒದಗಿಸಲು ಈ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಹಾಗೂ ಯೋಜನೆಗಳ ಮಾರ್ಗಸೂಚಿಗಳಿಗೆ ಸರ್ಕಾರದ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ರವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ಬೆಂಗಳೂರು
27 AUG 2018

ಸದರಿ ಪ್ರಸ್ತಾವನೆ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 737 ಬಿಎಂಎಸ್ 2018, ಬೆಂಗಳೂರು**

**ದಿನಾಂಕ:16.08.2018**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ 2017–18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ ಉಪ್ಪಾರ ಮತ್ತು ಇದರ ಉಪಜಾತಿಗಳ ಆರ್ಥಿಕಾಭಿವೃದ್ಧಿಗಾಗಿ ಸ್ಥಾಪಿಸಿದ ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ 1.ಸ್ವಯಂ ಉದ್ಯೋಗ ಸಾಲ ಯೋಜನೆ 2.ಅರಿವು ಶೈಕ್ಷಣಿಕ ಸಾಲ/ವಿದೇಶಿ ವಿಶ್ವವಿದ್ಯಾಲಯದಲ್ಲಿ ವ್ಯಾಸಂಗಕ್ಕೆ ಸಾಲ 3.ಗಂಗಾ ಕಲ್ಯಾಣ ನೀರಾವರಿ ಯೋಜನೆಯಲ್ಲಿ ಸಾಲ ಮತ್ತು ಸಹಾಯಧನ ಸೌಲಭ್ಯ ಒದಗಿಸಲು ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಇತರ ಯೋಜನೆಗಳಲ್ಲಿ ಈ ಜಾತಿಯವರು ಸಾಲ/ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿದಾರರಿಗೆ ಡಿ.ದೇವರಾಜ

......2

ಹಿಂದುಳಿದ ಅರಸು ವರ್ಗಗಳ ಅಭಿವೃದ್ಧಿ ನಿಗಮದಿಂದ ಸೌಲಭ್ಯ ಒದಗಿಸುವ ಷರತ್ತಿಗೊಳಪಟ್ಟು ಹಾಗೂ ಈ ಆದೇಶದೊಂದಿಗೆ ಲಗತ್ತಿಸಿರುವ ಈ ಯೋಜನೆಗಳ ಅನುಷ್ಠಾನಕ್ಕೆ ರಚಿಸಿರುವ ಮಾರ್ಗಸೂಚಿಗಳು ಕ್ರಮವಾಗಿ ಅನುಬಂಧ-01, 02, 03ರಲ್ಲಿ ಇರುವಂತೆ ಸರ್ಕಾರವು ಅನುಮೋದನೆ ನೀಡಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 343 ವೆಚ್ಚ-3/2018 ದಿನಾಂಕ:21.07.2018 ಸಹಮತಿಯನ್ವಯ ಹಾಗೂ ಆದೇಶ ಸಂಖ್ಯೆ:ಎಫ್‌ಡಿ 02 ಟಿಎಫ್‌ಪಿ 2018, ದಿ:03.04.2018ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್. ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಗೆ:

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ) (ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2), ಬೆಂಗಳೂರು
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
3. ವ್ಯವಸ್ಥಾಪಕ ನಿರ್ದೇಶಕರು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ ಬೆಂಗಳೂರು
5. ರಾಜ್ಯ ಖಜಾನಾಧಿಕಾರಿಗಳು ಬೆಂಗಳೂರು.

ಪ್ರತಿಯನ್ನು:-

1. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ,
3. ಸರ್ಕಾರದ ಉಪ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ,
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.